**All India Radio: Bangalore**
**National Bulletin In Kannada**
**15.12.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.12.2025 07.35 a.m.**

**<><><><>**

ಮುಖ್ಯಾಂಶಗಳು

1. ಇಂದಿನಿಂದ ಜೋರ್ಡಾನ್, ಇಥಿಯೋಪಿಯಾ, ಓಮನ್‌ಗೆ ಪ್ರಧಾನಿ ನರೇಂದ್ರ ಮೋದಿ ಪ್ರವಾಸ
2. ತಂತ್ರಜ್ಞಾನ ಮಾನವ ತೀರ್ಪನ್ನು ವರ್ಧಿಸಬೇಕೇ ಹೊರತು, ಅದನ್ನು ಬದಲಿಸಬಾರದು- ಸಿಜೆಐ ಸೂರ್ಯ ಕಾಂತ್ ಅಭಿಮತ\
3. ಆಸ್ಟ್ರೇಲಿಯಾ ಶೂಟ್‌ಔಟ್ ಪ್ರಕರಣ: ಮೃತಪಟ್ಟವರ ಸಂಖ್ಯೆ ೧೫ಕ್ಕೆ ಏರಿಕೆ
4. ಟಿ-೨೦ ಕ್ರಿಕೆಟ್: ದಕ್ಷಿಣ ಆಫ್ರಿಕಾ ವಿರುದ್ಧ ಭಾರತ ತಂಡಕ್ಕೆ ಭರ್ಜರಿ ಗೆಲುವು

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಜೋರ್ಡಾನ್, ಇಥಿಯೋಪಿಯಾ ಮತ್ತು ಓಮನ್ ಸೇರಿ ಮೂರು ರಾಷ್ಟ್ರಗಳ ಭೇಟಿಯನ್ನು ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಮೊದಲ ಚರಣದಲ್ಲಿ, ರಾಜ ಎರಡನೇ ಅಬ್ದುಲ್ಲಾ ಇಬ್ನ್ ಅಲ್ ಹುಸೇನ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ಮೋದಿ ಜೋರ್ಡಾನ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ, ಪ್ರಧಾನಿ ಮೋದಿ ಅವರು, ಜೋರ್ಡಾನ್ ರಾಜರನ್ನು ಭೇಟಿ ಮಾಡಿ ಪ್ರಾದೇಶಿಕ ವಿಷಯಗಳ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೫ ನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಜೋರ್ಡಾನ್‌ಗೆ ಭೇಟಿ ನೀಡುತ್ತಿದ್ದಾರೆ. ಈ ಸಂದರ್ಭದಲ್ಲಿ ಭಾರತ ಮತ್ತು ಜೋರ್ಡಾನ್ ನಡುವೆ ಉನ್ನತ ಮಟ್ಟದ ರಾಜಕೀಯ ಒಪ್ಪಂದ ಏರ್ಪಡುವ ಸಾಧ್ಯತೆಯಿದೆ. ಭಾರತ ಮತ್ತು ಜೋರ್ಡಾನ್ ಬಲವಾದ ಮತ್ತು ಸ್ಥಿರವಾಗಿ ವಿಸ್ತರಿಸುತ್ತಿರುವ ಆರ್ಥಿಕ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ. ಭಾರತವು ಜೋರ್ಡಾನ್‌ನ ಮೂರನೇ ಅತಿದೊಡ್ಡ ವ್ಯಾಪಾರ ಪಾಲುದಾರನಾಗಿ ಹೊರಹೊಮ್ಮುತ್ತಿದೆ. ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ಸುಮಾರು ೨.೮ ಶತಕೋಟಿ ಅಮೆರಿಕನ್ ಡಾಲರ್‌ಗಳ

ಮೌಲ್ಯದ್ದಾಗಿದೆ. ಜೋರ್ಡಾನ್ ಭಾರತಕ್ಕೆ ರಸಗೊಬ್ಬರಗಳ ಪ್ರಮುಖ ಪೂರೈಕೆದಾರ, ವಿಶೇಷವಾಗಿ ಫಾಸ್ಫೇಟ್‌ಗಳು ಮತ್ತು ಪೊಟ್ಯಾಶ್, ಇವು ಭಾರತದ ಕೃಷಿ ವಲಯಕ್ಕೆ ನಿರ್ಣಾಯಕವಾಗಿವೆ. ನಾಳೆ, ಪ್ರಧಾನಿ ಮೋದಿ ಅವರು ಇಥಿಯೋಪಿಯಾಕ್ಕೆ ತೆರಳಲಿದ್ದಾರೆ. ಇದು ಆ ದೇಶಕ್ಕೆ ಪ್ರಧಾನಿ ಮೋದಿ ಅವರ ಮೊದಲ ಭೇಟಿಯಾಗಿದೆ. ಈ ವೇಳೆ ಅವರು ಇಥಿಯೋಪಿಯಾ ಪ್ರಧಾನಿಯನ್ನು ಭೇಟಿ ಮಾಡಲಿದ್ದಾರೆ ಮತ್ತು ಭಾರತ-ಇಥಿಯೋಪಿಯಾ ದ್ವಿಪಕ್ಷೀಯ ಸಂಬಂಧಗಳ ಎಲ್ಲಾ ಅಂಶಗಳ ಕುರಿತು ವ್ಯಾಪಕ ಚರ್ಚೆಗಳನ್ನು ನಡೆಸಲಿದ್ದಾರೆ. ಪ್ರವಾಸದ ಅಂತಿಮ ಚರಣದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಒಮಾನ್‌ಗೆ ಭೇಟಿ ನೀಡಲಿದ್ದು, ಸುಲ್ತಾನ್ ಹೈತಮ್ ಇಬ್ನ್ ತಾರಿಕ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿಯು ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೦ ವರ್ಷಗಳನ್ನು ಗುರುತಿಸುತ್ತದೆ.

<><><>

ತಂತ್ರಜ್ಞಾನವು ಮಾನವ ತೀರ್ಪನ್ನು ವರ್ಧಿಸಬೇಕೇ ಹೊರತು, ಅದನ್ನು ಬದಲಿಸಬಾರದು ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದ ಅವರು, ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ತಂತ್ರಜ್ಞಾನ ತುಂಬಾ ಉಪಯುಕ್ತವಾಯಿತು. ಆದಾಗ್ಯೂ, ತಂತ್ರಜ್ಞಾನವು ತನ್ನದೇ ಆದ ಮಿತಿಗಳನ್ನು ಹೊಂದಿದೆ ಎಂಬುದನ್ನು ಯಾರೂ ಮರೆಯುವಂತ್ತಿಲ್ಲ ಎಂದರು. ಬಡವರು, ವೃದ್ಧರು ಅಥವಾ ಡಿಜಿಟಲ್ ಪರಿಕರಗಳಿಗೆ ಪರಿಚಯವಿಲ್ಲದವರನ್ನು ಹೊರಗಿಡುವ ಸುಧಾರಣೆಯು ಸುಧಾರಣೆಯೇ ಅಲ್ಲ. ಅದಕ್ಕಾಗಿಯೇ ತಂತ್ರಜ್ಞಾನವು ನ್ಯಾಯದ ಸೇವಕನಾಗಿ ಉಳಿಯಬೇಕು, ಅದರ ಪರ್ಯಾಯವಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿ ನಿಟ್ಟಿನಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಅಭಿಯಾನ ಯಶಸ್ಸು ಕಂಡಿದೆ. ಇದು ಜಗತ್ತಿನಲ್ಲೆಡೆ ಅತ್ಯಂತ ಪರಿಣಾಮಕಾರಿ ತಳಮಟ್ಟದ ನ್ಯಾಯದಾನ ಪ್ರಕ್ರಿಯೆಯಲ್ಲಿ ಒಂದಾಗಿದೆ ಎಂದು ಅವರು ಹೇಳಿದ್ದಾರೆ.

<><><>

ಆಸ್ಟ್ರೇಲಿಯಾದಲ್ಲಿ, ಯಹೂದಿಯರ ಹಬ್ಬ- ಹನುಕ್ಕಾ ಹಬ್ಬದ ಮೊದಲ ದಿನದಂದು ಸಿಡ್ನಿಯ ಬೋಂಡಿ ಬೀಚ್‌ನಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ ೧೫ ಕ್ಕೆ ಏರಿದೆ. ಆಸ್ಟ್ರೇಲಿಯಾದ ಪೊಲೀಸರು ಗುಂಡಿನ ದಾಳಿಯನ್ನು ಭಯೋತ್ಪಾದಕ ಘಟನೆ ಎಂದು

ಗುರುತಿಸಿದ್ದಾರೆ. ಅಧಿಕಾರಿಗಳ ಪ್ರಕಾರ, ಗುಂಡಿನ ದಾಳಿ ನಡೆಸಿದವರು ೫೦ ಮತ್ತು ೨೪ ವರ್ಷ ವಯಸ್ಸಿನ ತಂದೆ ಮತ್ತು ಮಗ. ತಂದೆ ಮೃತಪಟ್ಟಿದ್ದಾರೆ ಮತ್ತು ಮಗನನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಆತ ಪೊಲೀಸ್ ವಶದಲ್ಲಿದ್ದಾನೆ. ಘಟನೆಯಲ್ಲಿ ಇಬ್ಬರು ಪೊಲೀಸ್ ಅಧಿಕಾರಿಗಳು ಸೇರಿದಂತೆ ನಲವತ್ತೆರಡು ಜನರು ಗಾಯಗೊಂಡಿದ್ದಾರೆ. ಆರು ಬಂದೂಕುಗಳು ಮತ್ತು ಎರಡು ಸುಧಾರಿತ ಸ್ಫೋಟಕ ಸಾಧನಗಳನ್ನು ಸ್ಥಳದಿಂದ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಭೀಕರ ಭಯೋತ್ಪಾದಕ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ತೀವ್ರವಾಗಿ ಖಂಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಈ ದುಃಖದ ಸಮಯದಲ್ಲಿ ಭಾರತ,  ಆಸ್ಟ್ರೇಲಿಯಾದ ಜನರೊಂದಿಗೆ ನಿಲ್ಲುತ್ತದೆ ಎಂದು ತಿಳಿಸಿದ್ದಾರೆ. ಭಯೋತ್ಪಾದನೆಯ ಬಗ್ಗೆ ಭಾರತ ಶೂನ್ಯ ಸಹಿಷ್ಣುತೆಯನ್ನು ಹೊಂದಿದೆ ಹಾಗೂ ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳ ವಿರುದ್ಧದ ಹೋರಾಟವನ್ನು ಬೆಂಬಲಿಸುತ್ತದೆ ಎಂದು ಪ್ರಧಾನಿ ನರೇಂದ್ರ  ಮೋದಿ ಹೇಳಿದ್ದಾರೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಕೂಡ ಭಯೋತ್ಪಾದಕ ದಾಳಿಯನ್ನು ಖಂಡಿಸಿದ್ದಾರೆ.

<><><><>

ಬಿಜೆಪಿ ಸಂಸದೀಯ ಮಂಡಳಿಯು, ಬಿಹಾರ ಸಚಿವರು ಮತ್ತು ಐದು ಬಾರಿ ಶಾಸಕರಾಗಿರುವ ನಿತಿನ್ ನಬಿನ್ ಅವರನ್ನು ಪಕ್ಷದ ರಾಷ್ಟ್ರೀಯ ಕಾರ್ಯಾಧ್ಯಕ್ಷರನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿದೆ. ಸಂಘಟನಾ ನಾಯಕರಾಗಿ ವ್ಯಾಪಕವಾಗಿ ಪರಿಗಣಿಸಲ್ಪಟ್ಟಿರುವ ನಬಿನ್ ಅವರು, ಪ್ರಸ್ತುತ ಪಾಟ್ನಾ ಜಿಲ್ಲೆಯ ಬಂಕಿಪುರ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ ಮತ್ತು ನಿತೀಶ್ ಕುಮಾರ್ ನೇತೃತ್ವದ ಬಿಹಾರ ಸರ್ಕಾರದಲ್ಲಿ ರಸ್ತೆ ನಿರ್ಮಾಣ ಖಾತೆಯನ್ನು ಹೊಂದಿದ್ದಾರೆ. ನಿತಿನ್ ನಬಿನ್ ಅವರು ಹಿರಿಯ ಬಿಜೆಪಿ ನಾಯಕ ಮತ್ತು ಮಾಜಿ ಶಾಸಕ ದಿವಂಗತ ನಬಿನ್ ಕಿಶೋರ್ ಪ್ರಸಾದ್ ಸಿನ್ಹಾ ಅವರ ಪುತ್ರ. ೪೫ನೇ ವಯಸ್ಸಿನ ನಬಿನ್ ಅವರು, ಬಿಜೆಪಿ ಪಕ್ಷದ ಇತಿಹಾಸದಲ್ಲೇ ಅತ್ಯಂತ ಕಿರಿಯ ಕಾರ್ಯಾಧ್ಯಕ್ಷರಾಗಿ ನೇಮಕಗೊಂಡಿದ್ದಾರೆ ಮತ್ತು ಬಿಹಾರದಿಂದ ಈ ಹುದ್ದೆಗೆ ನೇಮಕಗೊಂಡ ಮೊದಲ ಬಿಜೆಪಿ ನಾಯಕರಾಗಿದ್ದಾರೆ. ಸುಮಾರು ಎರಡು ದಶಕಗಳ ಅನುಭವದೊಂದಿಗೆ ಅವರು ಪಕ್ಷದೊಳಗೆ ಹಲವಾರು ಪ್ರಮುಖ ಹುದ್ದೆಗಳನ್ನು

ನಿರ್ವಹಿಸಿದ್ದಾರೆ. ಭಾರತೀಯ ಜನತಾ ಯುವ ಮೋರ್ಚಾದ ಬಿಹಾರದ ಅಧ್ಯಕ್ಷರಾಗಿ ಮತ್ತು ಛತ್ತೀಸ್‌ಗಢದ ಬಿಜೆಪಿಯ ಚುನಾವಣಾ ಉಸ್ತುವಾರಿಯಾಗಿ ಕಾರ್ಯ ನಿರ್ವಹಿಸಿದ್ದಾರೆ.

<><><>

ಭಾರತೀಯ ರೈಲ್ವೆಯು ತನ್ನ ಸಂಪೂರ್ಣ ಬ್ರಾಡ್-ಗೇಜ್ ಜಾಲದಲ್ಲಿ ವಿದ್ಯುದ್ದೀಕರಣ ಪೂರ್ಣಗೊಳಿಸುವ ಹಂತದಲ್ಲಿದೆ. ೨೫ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಶೇಕಡಾ ೯೯ ರಷ್ಟು ವಿದ್ಯುದ್ದೀಕರಣ ಪೂರ್ಣಗೊಂಡಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ೨೦೧೯ ಮತ್ತು ೨೦೨೫ ರ ನಡುವೆ ಒಟ್ಟು ೩೩ ಸಾವಿರ ಕಿಲೋಮೀಟರ್‌ಗಳಿಗೂ ಹೆಚ್ಚು ಮಾರ್ಗವನ್ನು ವಿದ್ಯುದ್ದೀಕರಣ ಮಾಡಲಾಗಿದೆ. ಈ ಅವಧಿಯಲ್ಲಿ ವಿದ್ಯುದ್ದೀಕರಣಗೊಂಡ ಒಟ್ಟು ದೂರವು ಜರ್ಮನಿಯ ಸಂಪೂರ್ಣ ರೈಲ್ವೆ ಜಾಲಕ್ಕೆ ಬಹುತೇಕ ಸಮಾನವಾಗಿದೆ. ಇದು ದೇಶದ ಪರಿಣಾಮಕಾರಿ ರೈಲು ವಿಸ್ತರಣೆಯ ಪ್ರಮಾಣವನ್ನು ಪ್ರತಿಬಿಂಬಿಸುತ್ತದೆ ಎಂದು ರೈಲ್ವೆ ಸಚಿವಾಲಯ ಹೇಳಿದೆ.

<><><>

ಧರ್ಮಶಾಲಾದ ಹಿಮಾಚಲ ಪ್ರದೇಶ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐದು ಪಂದ್ಯಗಳ ಸರಣಿಯ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಭಾರತ ತಂಡ, ದಕ್ಷಿಣ ಆಫ್ರಿಕಾ ತಂಡವನ್ನು ಏಳು ವಿಕೆಟ್‌ಗಳಿಂದ ಸೋಲಿಸಿತು. ದಕ್ಷಿಣ ಆಫ್ರಿಕಾ ನೀಡಿದ್ದ ೧೧೮ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ, ೧೫.೫ ಓವರ್‌ಗಳಲ್ಲಿ ಮೂರು ವಿಕೆಟ್‌ಗಳಿಗೆ ೧೨೦ ರನ್ ಗಳಿಸಿತು. ಅಭಿಷೇಕ್ ಶರ್ಮಾ ೩೫ ರನ್ ಮತ್ತು ತಿಲಕ್ ವರ್ಮಾ ಅಜೇಯ ೨೫ ರನ್ ಗಳಿಸಿದರು. ಈ ಮೊದಲು, ಟಾಸ್ ಗೆದ್ದು ಮೈದಾನಕ್ಕೆ ಇಳಿದ ದಕ್ಷಿಣ ಆಫ್ರಿಕಾ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೧೧೭ ರನ್‌ಗಳಿಗೆ ಆಲೌಟ್ ಆಗಿತ್ತು. ನಾಯಕ ಐಡೆನ್ ಮಾರ್ಕ್ರಮ್ ೬೧ ರನ್‌ಗಳೊಂದಿಗೆ ಅಗ್ರ ಸ್ಕೋರರ್ ಆಯಿತು. ಭಾರತದ ಪರ ಅರ್ಶ್‌ದೀಪ್ ಸಿಂಗ್, ಹರ್ಷಿತ್ ರಾಣಾ, ವರುಣ್ ಚಕ್ರವರ್ತಿ ಮತ್ತು ಕುಲದೀಪ್ ಯಾದವ್ ತಲಾ ೨ ವಿಕೆಟ್‌ಗಳನ್ನು ಪಡೆದರು. ಈ ಗೆಲುವಿನೊಂದಿಗೆ, ಭಾರತ, ಐದು ಪಂದ್ಯಗಳ ಸರಣಿಯಲ್ಲಿ ೨-೧ ಅಂತರದಲ್ಲಿ ಮುನ್ನಡೆಯಲ್ಲಿದೆ. ಸರಣಿಯ ನಾಲ್ಕನೇ ಪಂದ್ಯ ಬುಧವಾರ ಲಕ್ನೋದಲ್ಲಿ ನಡೆಯಲಿದ್ದು, ಕೊನೆಯ ಪಂದ್ಯ ಶುಕ್ರವಾರ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿದೆ.

<><><>

ಅರ್ಜೆಂಟೀನಾದ ಫುಟ್ಬಾಲ್ ಆಟಗಾರ ಲಿಯೋನೆಲ್ ಮೆಸ್ಸಿ ತಮ್ಮ ಭಾರತ ಪ್ರವಾಸದ ನಾಲ್ಕನೇ ಮತ್ತು ಕೊನೆಯ ಚರಣದಲ್ಲಿ ಇಂದು ನವದೆಹಲಿಗೆ ಆಗಮಿಸಲಿದ್ದಾರೆ. ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಮುಖ್ಯ ಕಾರ್ಯಕ್ರಮಗಳು ನಡೆಯಲಿವೆ. ದೆಹಲಿ ಪ್ರವಾಸದ ಸಮಯದಲ್ಲಿ, ಮೂರು ಯುವ ಟ್ರೋಫಿಗಳನ್ನು ಗೆದ್ದ ಮಿನರ್ವಾ ಅಕಾಡೆಮಿಯ ತಂಡಗಳನ್ನು ಮೆಸ್ಸಿ ಸನ್ಮಾನಿಸಲಿದ್ದಾರೆ. ಕಾರ್ಯಕ್ರಮದ ಭಾಗವಾಗಿ ಸೆಲೆಬ್ರಿಟಿ ಫುಟ್ಬಾಲ್ ಪಂದ್ಯ ನಡೆಯಲಿದೆ. ೧೪ ವರ್ಷಗಳ ನಂತರ ಲಿಯೋನೆಲ್ ಮೆಸ್ಸಿ ಭಾರತಕ್ಕೆ ಭೇಟಿ ನೀಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>